**PW**-1

(ಇಂದು ದಿನಾಂಕಃ 06-06-2025 ರಂದು ಸತ್ಯಪ್ರತಿಜ್ಞೆಯ ಮೇರೆಗೆ ಪ್ರಮಾಣವಚನ ಬೋಧಿಸಲಾಯಿತು.)

**<u>ಮುಂದುವರಿದ ಪಾಟೀ ಸವಾಲು -1ನೇ ಪ್ರತಿವಾದಿ ಪರ ಶ್ರೀ ಆರ್.ಜಿ.ಎನ್ ವಕೀಲರಿಂದಃ</u>**

ದಾವಾ ಆಸ್ತಿಯಲ್ಲಿರುವ ಮನೆಯು ನಮ್ಮ ಪೂರ್ವಜರಿಗೆ ಹಾಗೂ ನನಗೆ ಸಂಬಂಧಪಟ್ಟಿದೆಂದು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರು ಪಡಿಸಿದ್ದು ಇರುವುದಿಲ್ಲ. ಹಾಜರು ಪಡಿಸಲು ತೊಂದರೆ ಇಲ್ಲ. ನನ್ನ ಹತ್ತಿರ ಮನೆಗೆ ಸಂಬಂಧಪಟ್ಟ ಯಾವುದೇ ದಾಖಲೆಗಳು ಇರುವುದಿಲ್ಲ. ದಾವಾ ಆಸ್ತಿಯನ್ನು ನನ್ನ ಹೆಸರಿಗೆ ಮಾಡಬೇಕೆಂಬ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿರುವ ಮನೆಗೂ, ನನಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. 1ನೇ ಪ್ರತಿವಾದಿಯವರಿಗೆ ವಿನಾಕಾರಣ ತೊಂದರೆ ಕೊಟ್ಟು ಬರುತ್ತಿದ್ದೀರಿ ಎಂದರೆ ಸರಿಯಲ್ಲ. 1ನೇ ಪ್ರತಿವಾದಿಯವರಿಗೆ ವಯಸ್ಸಾದ ಕಾರಣ ತೊಂದರೆ ನೀಡುವ ಉದ್ದೇಶದಿಂದ ಈ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ - ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಸಹಿ ಇದೆ.

ಪ್ರ.ದ.ನ್ಯಾ.ದಂ. ಕುಮಟಾ